4)	ತುಮಕೂರು - ಅರಸೀಕೆರೆ - ಶಿವಮೊಗ್ಗ - ಸಾಗರ - ಹೊನ್ನಾವರ - (ರಾಷ್ಟ್ರೀಯ ಹೆದ್ದಾರಿ 17ರಲ್ಲಿ ಸೇರುವಂತೆ)	::	332
5)	ಬೆಂಗಳೂರು - ಮೈಸೂರು - ಮಡಿಕೇರಿ - ಮಂಗಳೂರು (ರಾಷ್ಟ್ರೀಯ ಹೆದ್ದಾರಿ 17 ರಲ್ಲಿ ಸೇರುವಂತೆ)	::	385
6)	ಬೆಳಗಾಂ - ಬಿಜಾಪುರ - ಗುಲ್ಬರ್ಗಾ- ಹುಮ್ನಾಬಾದ್ (ರಾಷ್ಟ್ರೀಯ ಹೆದ್ದಾರಿ 9ನ್ನು ಸೇರುವಂತೆ)	::	364
7)	ಬೆಳಗಾಂ - ಬಾಗಲಕೋಟೆ - ರಾಯಚೂರು - ಮೆಹಬೂಬ್ನಗರ (ಆಂಧ್ರ ಪ್ರದೇಶದಲ್ಲಿ)	::	336
8)	ಚಿತ್ರದುರ್ಗ - ಹೊಳಲ್ಕೆರೆ - ಹೊಸದುರ್ಗ - ಚಿಕ್ಕಮಗಳೂರು - ಮೂಡಿಗೆರೆ - ಬೆಳ್ತಂಗಡಿ - ಬಂಟ್ವಾಳ - ಮಂಗಳೂರು (ರಾಷ್ಟ್ರೀಯ ಹೆದ್ದಾರಿ 17 ರಲ್ಲಿ ಸೇರುವಂತೆ)	::	283
9)	ಧಾರವಾಡ - ಲೋಂಡಾ - ಅನ್ಮೋಡ್ - ಪಣಜಿ (ರಾಷ್ಟ್ರೀಯ ಹೆದ್ದಾರಿ 17 ರಲ್ಲಿ ಸೇರುವಂತೆ)	::	95
10)	ಪಡುಬಿದ್ರಿ - ಕಾರ್ಕಳ - ಶೃಂಗೇರಿ - ತೀರ್ಥಹಳ್ಳಿ - ಶಿಕಾರಿಪುರ - ಶಿರಾಳಕೊಪ್ಪ - ಹುಬ್ಬಳ್ಳಿ - ಬಾಗಲಕೋಟೆ - ಹುನಗುಂದ	::	550
11)	ಶಿರಾ - (ಬೆಂಗಳೂರು - ಪೂನಾ ರಾಷ್ಟ್ರೀಯ ಹೆದ್ದಾರಿ 4) ಮಧುಗಿರಿ - ಗೌರಿಬಿದನೂರ್ - ಚಿಕ್ಕಬಳ್ಳಾಪುರ - ಚಿಂತಾಮಣಿ- ಶ್ರೀನಿವಾಸಪುರ - ಮುಳಬಾಗಿಲು (ಬೆಂಗಳೂರು - ಮದ್ರಾಸ್ ರಾಷ್ಟ್ರೀಯ ಹೆದ್ದಾರಿ ನಂ .4)	::	160
12)	ಚಿತ್ರದುರ್ಗ - ಶಿವಮೊಗ್ಗ - ಸಕಲೇಶಪುರ - ಮಡಿಕೇರಿ ಹಾಗೂ ಕೇರಳದಲ್ಲಿರುವ ತಲ್ಲಿಚೇರಿ	::	325
13)	ಬೆಂಗಳೂರು - ಕನಕಪುರ - ಮಳವಳ್ಳಿ - ನಂಜನಗೂಡು - ಸುಲ್ತಾನಬತ್ತೇರಿ - ಹಾಗೂ ಕೇರಳದಲ್ಲಿರುವ ಕಲ್ಲಿಕೋಟೆ	::	250
	ಒಟ್ಟು ಉದ್ದ		**4400 ಕಿ.ಮೀ.**

ರಾಜ್ಯದ ವಿದ್ಯುತ್ ಯೋಜನೆಗಳನ್ನು ಕಾರ್ಯಗೊಳಿಸುವುದು

287 - ಶ್ರೀ ಗುರುಪಾದಪ್ಪ ನಾಗಮಾರಪಳ್ಳಿ (ಔರಾದ್) : ಮಾನ್ಯ ಉಪ ಮುಖ್ಯಮಂತ್ರಿಗಳು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕಳೆದು ನಾಲ್ಕು ವರ್ಷಗಳಲ್ಲಿ ಎಷ್ಟು ಮಿನಿ ಜಲವಿದ್ಯುತ್ ಹಾಗೂ ಇತರ ಜಲವಿದ್ಯುತ್ ಯೋಜನೆಗಳನ್ನು ಒಪ್ಪಿಗೆಗಾಗಿ ಕೇಂದ್ರ ಸರ್ಕಾರಕ್ಕೆ ಕಳುಹಿಸಿ ಕೊಟ್ಟಿದೆ. (ವರ್ಷವಾರು ಅಂಕಿ ಅಂಶಗಳನ್ನು ಒದಗಿಸುವುದು)

ಅ) ಅನುಮತಿ ದೊರೆಯದೆ ಇರುವ ವಿದ್ಯುತ್ ಯೋಜನೆಗಳು ಈಗ ಯಾವ ಹಂತದಲ್ಲಿವೆ?

ಇ) ಇವುಗಳಲ್ಲಿ ಎಷ್ಟು ವಿದ್ಯುತ್ ಯೋಜನೆಗಳಿಗೆ ಕೇಂದ್ರದ ಅನುಮತಿ ದೊರೆತಿದೆ?

ಈ) ಸದರಿ ಅವಧಿಯಲ್ಲಿ ಕೇಂದ್ರ ಸರ್ಕಾರದೊಡನೆ ಈ ವಿಷಯವಾಗಿ ಎಷ್ಟು ಬಾರಿ ವ್ಯವಹರಿಸಲಾಗಿದೆ? ಈ ಎಲ್ಲಾ ವಿದ್ಯುತ್ ಯೋಜನೆಗಳನ್ನು ಎಂದು ಕಾರ್ಯಗತ ಗೊಳಿಸಲಾಗುವುದು?

ಉ) ರಾಜ್ಯದಲ್ಲಿ ವಿದ್ಯುತ್ ಉತ್ಪಾದನಾ ಸಾಮರ್ಥ್ಯವನ್ನು ಹೆಚ್ಚಿಸುವ ದೃಷ್ಟಿಯಿಂದ ಕೇಂದ್ರದ ಅನುಮತಿಗಾಗಿ ಕಾಯುತ್ತಿರುವ ವಿದ್ಯುತ್ ಯೋಜನೆಗಳಿಗೆ ಅನುಮತಿ ದೊರಕಿಸಿಕೊಡಲು ರಾಜ್ಯ ಸರ್ಕಾರವು ಕೇಂದ್ರ ಸರ್ಕಾರದ ಮೇಲೆ ಒತ್ತಡ ತರುವುದೆ?

ಶ್ರೀ ಎಸ್.ಎಂ. ಕೃಷ್ಣ (ಉಪ ಮುಖ್ಯಮಂತ್ರಿಗಳು)

ಅ) ಕಿರುಜಲವಿದ್ಯುತ್ ಯೋಜನೆಗಳನ್ನು ಕೇಂದ್ರ ಸರ್ಕಾರಕ್ಕೆ ಕಳುಹಿಸಿ ಕೊಟ್ಟಿಲ್ಲ.

ಆ) ಈ ಕೆಳಕಂಡ ಜಲವಿದ್ಯುತ್ ಯೋಜನೆಗಳನ್ನು ಕೇಂದ್ರ ಸರ್ಕಾರದ ಅನುಮತಿಗಾಗಿ ಕಳುಹಿಸಿ ಕೊಡಲಾಗಿದ್ದು ವಿವರಗಳು ಕೆಳಗಿನಂತಿವೆ.

1) ಸರಪಾಡಿ ಜಲವಿದ್ಯುತ್ ಯೋಜನೆ: ಈ ಯೋಜನೆಗೆ ಡಿಸೆಂಬರ್ 1990ರಲ್ಲಿ ಕೇಂದ್ರ ವಿದ್ಯುತ್ ಪ್ರಾಧಿಕಾರದಿಂದ ಅನುಮತಿ ಬಂದಿದೆ. ಕೇಂದ್ರ ಪರಿಸರ ಮತ್ತು ಅರಣ್ಯ ಇಲಾಖೆಯಿಂದ ಅನುಮತಿ ದೊರೆಯಬೇಕಾದಿದೆ. ಕೇಂದ್ರ ಪರಿಸರ ಇಲಾಖೆಯವರು ಕೇಳಿರುವ ಕೆಲವೊಂದು ವಿವರಗಳನ್ನು ಕಳುಹಿಸಿಕೊಟ್ಟಿದ್ದು ಕೇಂದ್ರ ಸರ್ಕಾರದ ಪರಿಸರ ಅನುಮತಿ ದೊರೆಯ ಬೇಕಾಗಿದೆ.

2) ಶಿವನ ಸಮುದ್ರ ಜಲವಿದ್ಯುತ್ ಯೋಜನೆ: ವಿವರವಾದ ಯೋಜನಾ ವರದಿಯನ್ನು ಕೇಂದ್ರ ವಿದ್ಯುತ್ ಪ್ರಾಧಿಕಾರಕ್ಕೆ ಅಕ್ಟೋಬರ್ 1987ರಲ್ಲಿ ಅನುಮತಿಗಾಗಿ ಕಳುಹಿಸಿಕೊಟ್ಟಿದೆ. ಕೇಂದ್ರ ವಿದ್ಯುತ್ ಪ್ರಾಧಿಕಾರದಿಂದ ಮತ್ತು ಕೇಂದ್ರ ಪರಿಸರ ಇಲಾಖೆಯಿಂದ ಅನುಮತಿ ದೊರೆಯಬೇಕಾಗಿದೆ.

3) ಮಹಾದಾಯಿ ಜಲವಿದ್ಯುತ್ ಯೋಜನೆ: ವಿವರವಾದ ಯೋಜನಾ ವರದಿಯನ್ನು ಕೇಂದ್ರ ವಿದ್ಯುತ್ ಪ್ರಾಧಿಕಾರಕ್ಕೆ ಆಗಸ್ಟ್ 91ರಲ್ಲಿ ಅನುಮತಿಗಾಗಿ ಕಳುಹಿಸಿಕೊಟ್ಟಿದೆ. ಈ ಯೋಜನೆಗೆ ಕೇಂದ್ರ ವಿದ್ಯುತ್ ಪ್ರಾಧಿಕಾರದಿಂದ ಮತ್ತು ಕೇಂದ್ರ ಅರಣ್ಯ ಮತ್ತು ಪರಿಸರ ಇಲಾಖೆಯಿಂದ ಅನುಮತಿ ದೊರೆಯಬೇಕಾಗಿದೆ. ಈ ಯೋಜನೆಯನ್ನು ಕಾರ್ಯಗತಗೊಳಿಸಲು ಬೇಕಾಗಿರುವ ಗೋವಾ ಸರ್ಕಾರದ ಅನುಮತಿಯನ್ನು ಪಡೆಯಲು ಕರ್ನಾಟಕ ರಾಜ್ಯ ಸರ್ಕಾರವು ಮಾತುಕತೆಯನ್ನು ನಡೆಸುತ್ತಿದ್ದು ಪ್ರಗತಿಯಲ್ಲಿದೆ.

ಇ) ಸರಪಾಡಿ ಜಲವಿದ್ಯುತ್ ಯೋಜನೆಗೆ ಮಾತ್ರ ಡಿಸೆಂಬರ್ 1990ರಲ್ಲಿ ಕೇಂದ್ರ ವಿದ್ಯುತ್ ಪ್ರಾಧಿಕಾರದ ಮಂಜೂರಾತಿ ದೊರೆತಿದೆ. ಮಹಾದಾಯಿ ಮತ್ತು ಶಿವನಸಮುದ್ರದ ಯೋಜನೆಗಳಿಗೆ ಕೇಂದ್ರ ವಿದ್ಯುತ್ ಪ್ರಾಧಿಕಾರದ ಅನುಮತಿ ದೊರೆಯಬೇಕಾಗಿದೆ. ಈಮೇಲೆ ತಿಳಿಸಿರುವ ಎಲ್ಲಾ ಯೋಜನೆಗಳಿಗೂ ಕೇಂದ್ರ ಪರಿಸರ ಮತ್ತು ಅರಣ್ಯ ಇಲಾಖೆಯಿಂದ ಅನುಮತಿ ದೊರೆಯಬೇಕಾಗಿದೆ.

ಈ) ವಿದ್ಯುತ್ ಯೋಜನೆಗಳನ್ನು ಕಾರ್ಯರೂಪಕ್ಕೆ ತರಲು ಬೇಕಾದ ಅನುಮತಿಯನ್ನು ಕೊಡಲು ಕೇಂದ್ರ ಸರ್ಕಾರಕ್ಕೆ ಮೇಲಿಂದ ಮೇಲೆ ಕೇಳಿಕೊಳ್ಳಲಾಗಿದೆ. ಕೇಂದ್ರ ಸರ್ಕಾರದ ಅನುಮತಿ ದೊರೆತ ನಂತರ ಈ ಎಲ್ಲಾ ಯೋಜನೆಗಳನ್ನು 8 ಮತ್ತು 9ನೆಯ ಪಂಚವಾರ್ಷಿಕ ಯೋಜನೆಯಲ್ಲಿ ಕಾರ್ಯಗತಗೊಳಿಸಲಾಗುವುದು.

ಉ) ಹಾದು